ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಗೊಂದಲ)

ಶ್ರೀ ಎಸ್. ಸಿದ್ದರಾಮಯ್ಯ (ವಿರೋಧ ಪಕ್ಷದ ನಾಯಕರು): ಮಾನ್ಯ ಅಧ್ಯಕ್ಷರೆ, ಪ್ರಜಾಪ್ರಭುತ್ವದ ರೀತಿ ಅಲ್ಲ ಇದು, ಪ್ರಜಾಪ್ರಭುತ್ವದ ಕಗ್ಗೊಲೆ.XXX ಸರ್ಕಾರ ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿದೆ. ಅವರಿಗೇನೂ ನಾಚಿಕೆ ಇಲ್ಲ. ನಾವು ಬಾವಿಯಲ್ಲಿ ಇದ್ದರೂ ಕೂಡ ಬಿಲ್‌ಗಳನ್ನೆಲ್ಲಾ ಪಾಸ್ ಮಾಡಿಕೊಳ್ಳುತ್ತಿದ್ದೀರಿ. House Order ನಲ್ಲಿ ಇಲ್ಲದೆ ಇದ್ದರೂ ಕೂಡ ಮಾಡಿಕೊಳ್ಳುತ್ತಿದ್ದೀರಿ. ನಾವು ಇದನ್ನು ವಿರೋಧ ಮಾಡಿ, ನಾವು ಇದನ್ನು ಖಂಡಿಸಿ, ಪ್ರಜಾಪ್ರಭುತ್ವದ ಕಗ್ಗೊಲೆಯನ್ನು ಖಂಡಿಸಿ ನಾವು ಇವತ್ತು ಇಧ್ಧನ್ನು ಪ್ರತಿಭಟಿಸಿ ನಾವೆಲ್ಲರೂ ಬಾಯ್‌ಕಾಟ್ ಮಾಡಿ ಹೊರಗಡೆ ಹೋಗುತ್ತಿದ್ದೇವೆ.

7. (ಕಾಂಗ್ರೆಸ್ ಹಾಗೂ ಜೆ. ಡಿ. ಎಸ್. ಶಾಸಕಾಂಗ ಪಕ್ಷದ ಶಾಸಕರು ಸಭಾತ್ಯಾಗ ಮಾಡಿದರು).

8. ಶಾಸನ ರಚನೆ:

ಪರ್ಯಾಲೋಚನಾ ಪ್ರಸ್ತಾವ (ಮುಂದುವರೆದು)

1. ಕರ್ನಾಟಕ ಸಹಕಾರ ಸಂಘಗಳ(ತಿದ್ದುಪಡಿ) ವಿಧೇಯಕ, 2011

ಶ್ರೀ ಲಕ್ಷ್ಮಣ ಎಸ್. ಸವದಿ (ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು): ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮುಂದೆ ಮತಕ್ಕೆ ಹಾಕುತ್ತೇನೆ.

"2001ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಈ- ಸಭೆಯು ಪರ್ಯಾಲೋಚಿಸುತ್ತದೆ" ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

(ಮಾನ್ಯ ಸಭಾಧ್ಯಕ್ಷರ ಆದೇಶದ ಮೇರೆಗೆ ಕಡತದಿಂದ ತೆಗೆದುಹಾಕಲಾಗಿದೆ)